# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 :ಹೆಗ್ಗನಹಳ್ಳಿ

**ದಿನಾಂಕ: 16.07.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಜಯಂತ್‌ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ನಂದೀಶ್ ಕುಮಾರ್ ಎಸ್ ಎಸ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4 | ಕೆ.ಎನ್ ರಾಜಪ್ಪ | – |
| 5 | ಚನ್ನೇಗೌಡ ಎಸ್ | ತೋಟಗಾರಿಕೆ ಇಲಾಖೆ |
| 6 | ಅನುಪಮ ಎನ್ | ಕಂದಾಯ ವಸೂಲಿಗಾರರು |
| 7 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 8 | ಕೆ ಎ ಉಮೇಶ್ | ಸದಸ್ಯರು |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಜಯಂತ್‌ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- <u>ವಿಷಯ ಸಂಖ್ಯೆ: 1 :– ಸುಂಕದಕಟ್ಟೆ, ಪೈಪ್ ಲೇನ್ ನಲ್ಲಿರುವ ಪಾರ್ಕ್‌ಗಳಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸುವ ಬಗ್ಗೆ</u>

  ಸುಂಕದಕಟ್ಟೆ ಪೈಪ್‌ಲೇನ್ ನಲ್ಲಿರುವ ಪಾರ್ಕ್‌ಗಳಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಗೀ,
  ಪಾರ್ಕ್‌ಗಳಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸುವ ಸಂಬಂಧ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) ರವರು ಕ್ರಮ ಕೈಗೊಳ್ಳಬೇಕಾಗಿದ್ದು ಸದರಿಯವರ ಗಮನಕ್ಕೆ ತರಲಾಗುವುದೆಂದು ನೋಡಲ್ ಅಧಿಕಾರಿರವರು ತಿಳಿಸಿದರು.

- <u>ವಿಷಯ ಸಂಖ್ಯೆ: 2 :– ಲಕ್ಷ್ಮಣನಗರದ 5ನೇ ಮುಖ್ಯ ರಸ್ತೆ & 6ನೇ ಮುಖ್ಯರಸ್ತೆಗಳಲ್ಲಿ ಚಾಚಿಕೊಂಡಿರುವ ಕೊಂಬೆಗಳನ್ನು ಕತ್ತರಿಸುವ ಬಗ್ಗೆ.</u>

ಸದಸ್ಯರಾದ ಶ್ರೀ ಕೆ.ಎ ಉಮೇಶ್ ರವರು ಮಾತನಾಡಿ, ಲಕ್ಷ್ಮಣನಗರದ 5ನೇ ಮುಖ್ಯರಸ್ತೆ & 6ನೇ ಮುಖ್ಯರಸ್ತೆಯ ಬದಿಗಳಲ್ಲಿ ಬೆಳೆದಿರುವ ಮರಗಳ ರೆಂಬೆ-ಕೊಂಬೆಗಳು ಚಾಚಿಕೊಂಡಿದ್ದು, ಮುಂಜಾಗ್ರತ ಕ್ರಮವಾಗಿ ಇವುಗಳನ್ನು ಕತ್ತರಿಸಲು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಹಾಜರಿದ್ದ ಅರಣ್ಯ ಇಲಾಖೆ ಸಿಬ್ಬಂದಿಗೆ ಸದರಿ ಸಮಸ್ಯೆಯನ್ನು ಪರಿಹರಿಸಲು ಸೂಚಿಸಿದರು.

**ವಿಷಯ ಸಂಖ್ಯೆ: 3 :- ಬಿ ಖಾತೆಗೆ ಸಲ್ಲಿಸಬೇಕಾಗಿರುವ ವಿವರಗಳನ್ನು ಸೂಚನಾ ಫಲಕಗಳಲ್ಲಿ ಅಳವಡಿಸುವ ಬಗ್ಗೆ.**

ಸದಸ್ಯರಾದ ಕೆ.ಎ ಉಮೇಶ್ ರವರು ಮಾತನಾಡಿ, ಈ ಹಿಂದಿನ ಸಭೆಯಲ್ಲಿ ಈಗಾಗಲೇ ಚರ್ಚಿಸಿರುವಂತೆ ಬಿ ಖಾತೆಯನ್ನು ಪಡೆಯಲು ಸಲ್ಲಿಸಬೇಕಾಗಿರುವ ದಾಖಲೆಗಳ ವಿವರಗಳನ್ನು ಕಛೇರಿಯ ಆವರಣದ ಸೂಚನಾ ಫಲಕಗಳಲ್ಲಿ ಕನ್ನಡದಲ್ಲಿ ಅಳವಡಿಸುವಂತೆ ಕೋರಿದರು.

ಇದಕ್ಕೆ ಕಂದಾಯ ವಸೂಲಿಗಾರರಾದ ಮುನಿರಾಜು ರವರು ಮಾತನಾಡಿ, ಬಿ ಖಾತೆಗೆ ಸಲ್ಲಿಸಬೇಕಾಗಿರುವ ದಾಖಲೆಗಳ ಮಾಹಿತಿಯನ್ನು ಕನ್ನಡದಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವುದಾಗೀ ತಿಳಿಸಿದರು.

**ವಿಷಯ ಸಂಖ್ಯೆ: 4 :-ಲಕ್ಷ್ಮಣನಗರದ 5ನೇ ಮುಖ್ಯರಸ್ತೆ & 6ನೇ ಮುಖ್ಯರಸ್ತೆಯಲ್ಲಿ ಡಾಂಬರೀಕರಣ ಮಾಡಲು ಕೋರಿ**

ಸದಸ್ಯರಾದ ಶ್ರೀ ಕೆ.ಎ ಉಮೇಶ್ ರವರು ಮಾತನಾಡಿ, ಲಕ್ಷ್ಮಣನಗರದ 5ನೇ ಮುಖ್ಯರಸ್ತೆ & 6ನೇ ಮುಖ್ಯರಸ್ತೆಯಲ್ಲಿ ತುಂಬಾ ಹಿಂದೆ ಡಾಂಬರೀಕರಣ ಕೈಗೊಂಡಿದ್ದು, ಪ್ರಸ್ತುತ ರಸ್ತೆಗಳು ಹಾಳಾಗಿದ್ದು, ಡಾಂಬರೀಕರಣ ಕೈಗೊಂಡಿರುವುದಿಲ್ಲ. ಆದ್ದರಿಂದ ಸದರಿ ರಸ್ತೆಗಳಲ್ಲಿ ಡಾಂಬರೀಕರಣ ಮಾಡುವಂತೆ ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರಾದ ಜಯಂತ್ ಕುಮಾರ್ ರವರು ಮಾತನಾಡಿ, ಅನುದಾನದ ಕೊರತೆಯಿಂದಾಗೀ ಸದರಿ ರಸ್ತೆಗಳಲ್ಲಿ ಡಾಂಬರೀಕರಣವನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ. ಆದರೆ ಸದರಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಪ್ರಸಕ್ತ ಸಾಲಿನಲ್ಲಿ ಟೆಂಡರ್ ಕರೆಯಲಾಗಿದ್ದು, ಕಡತವು ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ. ಟೆಂಡರ್ ಪ್ರಕ್ರಿಯೆ ಮುಗಿದು ಸಂಬಂಧಪಟ್ಟ ಗುತ್ತಿಗೆದಾರರಿಗೆ ಕಾರ್ಯಾದೇಶ ದೊರೆತ ನಂತರ ಶೀಘ್ರದಲ್ಲಿಯೇ ಪ್ರಸ್ತಾಪಿತ ರಸ್ತೆಗಳಲ್ಲಿ ಡಾಂಬರೀಕರಣವನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದರು.

**ವಿಷಯ ಸಂಖ್ಯೆ: 5:-BBMP SAHAYA APP:**

- ಜಯಂತ್ ಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್‌ಕುಮಾರ್‌ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ಸದಸ್ಯ ಕಾರ್ಯದರ್ಶಿ** | **ವಾರ್ಡ್ ಸಮಿತಿ ಅಧ್ಯಕ್ಷರು** |
| **ಹಾಗೂ ಸಹಾಯಕ ಅಭಿಯಂತರರು** | **ಹಾಗೂ ವಾರ್ಡ್‌ನ ನೋಡಲ್‌ಅಧಿಕಾರಿ** |
| **ವಾರ್ಡ್ ನಂ.71, ಹೆಗ್ಗನಹಳ್ಳಿ** | **ವಾರ್ಡ್ ನಂ.71, ಹೆಗ್ಗನಹಳ್ಳಿ** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ